# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1533 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು ಎಷ್ಟು PDO ಹುದ್ದೆಗಳಿವೆ; ಪ್ರಸ್ತುತ ಎಷ್ಟು ಹುದ್ದೆಗಳು ಖಾಲಿಯಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಒಟ್ಟು 5954 ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳಿರುತ್ತವೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳು ಖಾಲಿ ಇರುವ ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಿದೆ. |
| (ಆ) | PDO ಹುದ್ದೆಗಳು ದೀರ್ಘಕಾಲದಿಂದ ಖಾಲಿ ಇರುವುದರಿಂದ ಪಂಚಾಯತ್ ಮಟ್ಟದಲ್ಲಿ ಅಭಿವೃದ್ಧಿ ಯೋಜನೆಗಳ ಅನುಷ್ಠಾನ, ದಾಖಲೆ ನಿರ್ವಹಣೆ, ಸಾರ್ವಜನಿಕ ಸೇವೆಗಳಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇರುವುದೇ; ಸರ್ಕಾರ ಇದನ್ನು ತ್ವರಿತವಾಗಿ ಪರಿಹರಿಸುವುದಕ್ಕೆ ಏನು ಕ್ರಮಗಳನ್ನು ಕೈಗೊಂಡಿದೆ; | 1. ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018 (ಭಾಗ-1) ದಿನಾಂಕ:23.11.2018 ರಲ್ಲಿ ಗ್ರಾಮ ಪಂಚಾಯತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆ ನಿವೃತ್ತಿ, ಅಮಾನತ್ತು ಹಾಗೂ ಇನ್ನಿತರೆ ಕಾರಣಗಳಿಗೆ ತೆರವಾದಲ್ಲಿ ಆ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಕಾರ್ಯದರ್ಶಿ ಪೂರ್ಣಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅವರಿಗೆ ಪ್ರಭಾರ ವಹಿಸಲು ಹಾಗೂ ಪೂರ್ಣಕಾಲಿಕ ಗ್ರೇಡ್-1 ಕಾರ್ಯದರ್ಶಿ ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಅಭಿವೃದ್ಧಿ ಯೋಜನೆಗಳ ಅನುಷ್ಠಾನ, ದಾಖಲೆ ನಿರ್ವಹಣೆ, ಸಾರ್ವಜನಿಕ ಸೇವೆಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ ಮತ್ತು ಆಡಳಿತವನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ವಹಿಸಲಾಗಿರುತ್ತದೆ.<br><br>3. ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ಪೈಕಿ ಉಳಿಕೆ ಮೂಲ ವೃಂದದ 150 ಮತ್ತು ಕಲ್ಯಾಣ ಕರ್ನಾಟಕ ವೃಂದದ 97 ಒಟ್ಟು 247 ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ದಿನಾಂಕ:15.03.2024 ರಂದು ಅಧಿಸೂಚನೆಯನ್ನು ಮತ್ತು 17-09-2024 ರಲ್ಲಿ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದು, ದಿನಾಂಕ:16.11.2024 ಮತ್ತು 17.11.2024 ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಹಾಗೂ ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ದಿನಾಂಕ:07.12.2024 ಮತ್ತು 08.12.2024 ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗಿರುತ್ತದೆ. |

| | | |
|---|---|---|
| | | 4. ಮುಂದುವರೆದು, ದಾಖಲೆಗಳ ಪರಿಶೀಲನೆಗಾಗಿ 1:3 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕಲ್ಯಾಣ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ ದಿನಾಂಕ:08-07-2025 ರಂದು ಮತ್ತು ಉಳಿಕೆ ಮೂಲಕ ವೃಂದಕ್ಕೆ ಸಂಬಂಧಿಸಿದಂತೆ 20-08-2025 ರಂದು ಪ್ರಕಟಿಸಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಬಾಕಿ ಇರುತ್ತದೆ. ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>5. ಮುಂಬಡ್ತಿ ಕೋಟಾದ ಅಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದಂತೆ, ದಿನಾಂಕ:01.01.2025 ರಲ್ಲಿದ್ದಂತೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ರಾಜ್ಯ ಮಟ್ಟದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿರುತ್ತದೆ. ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಲು ಪರಿಶೀಲನೆಯಲ್ಲಿದ್ದು, ಮುಂಬಡ್ತಿ ಕೋಟಾ ಅಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಹುದ್ದೆಗಳನ್ನು ಆನಂತರದಲ್ಲಿ ಭರ್ತಿ ಮಾಡಬೇಕಿರುತ್ತದೆ. |
| (ಇ) | ಅನೇಕ PDOಗಳನ್ನು ಬೇರೆ ಇಲಾಖೆಗೆ ಡೆಪ್ಯುಟೇಶನ್ ಮೇಲೆ ಕಳುಹಿಸಿರುವುದು ಸ್ಥಳೀಯ ಸಂಸ್ಥೆಗಳ ದಿನನಿತ್ಯ ಆಡಳಿತಕ್ಕೆ ಅಡ್ಡಿಯಾಗುತ್ತಿರುವ ಕಾರಣ ಹೆಚ್ಚುವರಿ PDO ಹುದ್ದೆ ಸೃಜನೆ ಕುರಿತು ಸರ್ಕಾರದ ಅಭಿಪ್ರಾಯವೇನು; | ಹೆಚ್ಚುವರಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸೃಜನೆಗೆ ನಿಯಮಗಳಡಿಯಲ್ಲಿ ಅವಕಾಶವಿರುವುದಿಲ್ಲ. |
| (ಈ) | ಗ್ರಾಮ ಪಂಚಾಯತ್‌ಗಳು ಪರಿಣಾಮಕಾರಿಯಾಗಿ ಹಾಗೂ ಕಾರ್ಯಕ್ಷಮವಾಗಿ ಕಾರ್ಯ ನಿರ್ವಹಿಸಬೇಕಾದರೆ PDO ಹುದ್ದೆಗಳ ಖಾಲಿ ಸ್ಥಾನಗಳ ಭರ್ತಿ ಮತ್ತು ಡೆಪ್ಯುಟೇಶನ್ ನೀತಿಯಲ್ಲಿ ಬದಲಾವಣೆ ತರಲು ಸರ್ಕಾರ ತೆಗೆದುಕೊಳ್ಳುತ್ತಿರುವ ತಕ್ಷಣ ಹಾಗೂ ದೀರ್ಘಕಾಲಿಕ ಕ್ರಮಗಳೇನು? | 1. ಖಾಲಿ ಇರುವ 247 ಪಂಚಾಯತಿ ಅಭಿವೃದಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018(-1) ದಿನಾಂಕ:23.11.2018 ರಲ್ಲಿ ಈಗಾಗಲೇ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆ ಖಾಲಿ ಇದ್ದಲ್ಲಿ ವಹಿಸಬೇಕಾದ ಕ್ರಮಗಳ ಕುರಿತು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br>3. ಸರ್ಕಾರದ ಆದೇಶ ಸಂಖ್ಯೆ:RDPR 57 GPK 2025, ದಿನಾಂಕ:21.07.2025 ರಲ್ಲಿ ಕಾರ್ಯನಿರತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಪೈಕಿ ಶೇಕಡ.4 ರಷ್ಟು ಮೀರದಂತೆ ಆಡಳಿತಾತ್ಮಕ ಹಿತದೃಷ್ಟಿಯಿಂದ ಖಾಲಿ ಇರುವ ಗ್ರಾಮ ಪಂಚಾಯತಿಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಜಿಲ್ಲೆಯೊಳಗೆ ನಿಯೋಜನೆ ಮೇರೆಗೆ ನಿಯೋಜಿಸಲು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ. |

ಸಂಖ್ಯೆ: ಗ್ರಾಅಪ 1026 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಅನುಬಂಧ-

| ಪಂಚಾಯಿತಿ ಅಭಿವೃದ್ಧಿ ಅಧಿಕಾರಿ | | |
|---|---|---|
| ಕ್ರ.ಸಂ | ಜಿಲ್ಲೆಗಳ ಹೆಸರು | ಖಾಲಿ ಹುದ್ದೆಗಳ ಸಂಖ್ಯೆ |
| 1 | ಬಾಗಲಕೋಟೆ | 1 |
| 2 | ಬಳ್ಳಾರಿ | 29 |
| 3 | ಬೆಳಗಾವಿ | 67 |
| 4 | ಬೆಂಗಳೂರು ನಗರ ಜಿಲ್ಲೆ | 0 |
| 5 | ಬೆಂಗಳೂರು ಗ್ರಾಮಾಂತರ | 0 |
| 6 | ಬೆಂಗಳೂರು ದಕ್ಷಿಣ | 3 |
| 7 | ಬೀದರ್ | 40 |
| 8 | ಚಾಮರಾಜನಗರ | 26 |
| 9 | ಚಿಕ್ಕಬಳ್ಳಾಪುರ | 28 |
| 10 | ಚಿಕ್ಕಮಗಳೂರು | 55 |
| 11 | ಚಿತ್ರದುರ್ಗ | 13 |
| 12 | ದಕ್ಷಿಣ ಕನ್ನಡ | 72 |
| 13 | ದಾವಣಗೆರೆ | 18 |
| 14 | ಧಾರವಾಡ | 9 |
| 15 | ಗದಗ | 26 |
| 16 | ಹಾಸನ | 48 |
| 17 | ಹಾವೇರಿ | 53 |
| 18 | ಕಲಬುರಗಿ | 68 |
| 19 | ಕೊಡಗು | 43 |
| 20 | ಕೋಲಾರ | 30 |
| 21 | ಕೊಪ್ಪಳ | 10 |
| 22 | ಮಂಡ್ಯ | 33 |
| 23 | ಮೈಸೂರು | 1 |
| 24 | ರಾಯಚೂರು | 45 |
| 25 | ಶಿವಮೊಗ್ಗ | 49 |
| 26 | ತುಮಕೂರು | 75 |
| 27 | ಉಡುಪಿ | 26 |
| 28 | ಉತ್ತರ ಕನ್ನಡ | 60 |
| 29 | ವಿಜಯನಗರ | 47 |
| 30 | ವಿಜಯಪುರ | 1 |
| 31 | ಯಾದಗಿರಿ | 18 |
| | ಒಟ್ಟು | 994 |